ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1192
2. ಸದಸ್ಯರ ಹೆಸರು : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆ ಕ್ಷೇತ್ರ)
3. ಉತ್ತರಿಸುವ ದಿನಾಂಕ : 23.12.2021
4. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯ ಸರ್ಕಾರಿ ನೌಕರರ ನಗದು ರಹಿತ ಚಿಕಿತ್ಸೆಗಾಗಿ ಆದೇಶ ಮತ್ತು ಮಾರ್ಗಸೂಚಿಯನ್ನು ಹೊರಡಿಸಲಾಗಿದೆಯೇ; ಈ ಯೋಜನೆಯಿಂದ ಪ್ರಯೋಜನ ಪಡೆಯುವ ಸರ್ಕಾರಿ ನೌಕರರ ಮತ್ತು ಸಂಬಂಧಿತರ ಸಂಖ್ಯೆ ಎಷ್ಟು; ಯಾವ ಕಾಲಮಿತಿಯಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು;	2020-21 ಹಾಗೂ 2021-22ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಅವಲಂಬಿತ ಕುಟುಂಬ ಸದಸ್ಯರಿಗೆ "**ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ**" ಎಂಬ ನೂತನ ಯೋಜನೆಯನ್ನು ರೂಪಿಸಲಾಗುತ್ತಿದೆ. ಈ ಸಂಬಂಧದಲ್ಲಿ ದಿನಾಂಕ: 17.08.2021ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 16 ಎಸ್‌ಎಂಆರ್ 2020ರಲ್ಲಿ ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರಿಗೆ ವಿಸ್ತೃತ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಲಾಗಿದೆ. ಈ ಯೋಜನೆಯಿಂದ ಅಂದಾಜು 5 ಲಕ್ಷ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಅವಲಂಬಿತ 25 ಲಕ್ಷ ಸದಸ್ಯರು ಪ್ರಯೋಜನ ಪಡೆಯಲಿದ್ದಾರೆ. ಈ ಯೋಜನೆಯನ್ನು ಆದ್ಯತೆಯ ಮೇಲೆ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದೆ.
ಆ)	ಸರ್ಕಾರಿ ನೌಕರರ ಚರಾಸ್ತಿ ಮತ್ತು ಸ್ಥಿರಾಸ್ತಿ ಖರೀದಿಸುವ ಸಂದರ್ಭದಲ್ಲಿ ಖರೀದಿ ಪೂರ್ವದಲ್ಲಿ ಸಕ್ಷಮ ಪ್ರಾಧಿಕಾರಗಳಿಂದ ಅನುಮತಿಯನ್ನು ಪಡೆಯಬೇಕಾಗಿದ್ದು ಇದರಿಂದಾಗುವ ವಿಳಂಬದಿಂದಾಗಿ ನೌಕರರಿಗೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ; ಚರಾಸ್ತಿ ಮತ್ತು ಸ್ಥಿರಾಸ್ತಿಯ ಖರೀದಿ ಮಾಡಿ ನಂತರ ವಿವರವನ್ನು ಕಾಲಮಿತಿಯಲ್ಲಿ ವರದಿ ಮಾಡುವ ಕುರಿತು ತಿದ್ದುಪಡಿಯನ್ನು ತರಲಾಗುವುದೇ;	ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು 1966 ಪರಿಷ್ಕೃತವಾಗಿ ಕರ್ನಾಟಕ ನಾಗರಿಕ ಸೇವಾ(ನಡತೆ) ನಿಯಮಗಳು 2021 ಜಾರಿಗೆ ಬಂದಿರುತ್ತದೆ. ಸದರಿ ನಿಯಮಗಳ, ನಿಯಮ 24ರ ಉಪನಿಯಮ (4)ರನ್ವಯ ಚರಾಸ್ತಿ ಖರೀದಿಯು ಸರ್ಕಾರಿ ನೌಕರನ ಮಾಸಿಕ ಮೂಲ ವೇತನ ಮೀರಿದಾಗ ನಿಯಮಿಸಿದ ಪ್ರಾಧಿಕಾರಕ್ಕೆ ವರದಿ ಮಾಡಬೇಕಾಗುತ್ತದೆ. ಇದೇ ನಿಯಮಗಳ ಉಪನಿಯಮ (3)ರಂತೆ ಸರ್ಕಾರಿ ನೌಕರನು ಅಥವಾ ಅವನ ಕುಟುಂಬದ ಯಾರೇ ಸದಸ್ಯನು ತನ್ನ ಸ್ವಂತ ಹೆಸರಿನಲ್ಲಾಗಲೀ ಅಥವಾ ತನ್ನ ಕುಟುಂಬದ ಯಾರೇ ಸದಸ್ಯನ ಹೆಸರಿನಲ್ಲಾಗಲೀ ಸ್ಥಿರಾಸ್ತಿಯನ್ನು ಖರೀದಿಸುವ ಪೂರ್ವದಲ್ಲಿ ನಿಯಮಿಸಿದ ಪ್ರಾಧಿಕಾರಕ್ಕೆ ತಿಳಿಸಬೇಕಾಗುತ್ತದೆ. ಆದರೆ, ಈ ರೀತಿಯ ವ್ಯವಹಾರವು ಸರ್ಕಾರಿ ನೌಕರನೊಂದಿಗೆ ಅಧಿಕೃತ ವ್ಯವಹಾರಗಳನ್ನು ಹೊಂದಿರುವ ವ್ಯಕ್ತಿಯೊಂದಿಗೆ ಮಾಡುವಲ್ಲಿ ನಿಯಮಿಸಲಾದ ಪ್ರಾಧಿಕಾರದ ಪೂರ್ವ ಮಂಜೂರಾತಿ ಪಡೆದುಕೊಳ್ಳಬೇಕಾಗುತ್ತದೆ. 2021ರಲ್ಲಿ ಪ್ರಕಟಿಸಿರುವ ಪರಿಷ್ಕೃತ ನಿಯಮಗಳಲ್ಲಿ ಸಮರ್ಥನೀಯ ಕಾರಣಗಳಿಂದಾಗಿ ನಿಯಮಿತ ಪ್ರಾಧಿಕಾರಿಗೆ ತಿಳಿಸದೇ ಸ್ಥಿರಾಸ್ತಿಯನ್ನು ಖರೀದಿಸಿದ್ದಲ್ಲಿ ಅಂತಹ ವ್ಯವಹಾರ ಕೈಗೊಂಡ ಎರಡು ತಿಂಗಳ ಒಳಗಾಗಿ ವಿವರಗಳು ಹಾಗೂ ಪೂರಕ ದಾಖಲೆಗಳು ಹಾಗೂ ಸಮರ್ಥನೀಯ ಕಾರಣಗಳೊಂದಿಗೆ ನಿಯಮಿತ ಪ್ರಾಧಿಕಾರಿಗೆ ವರದಿ ಮಾಡಲು ಅವಕಾಶ ನೀಡಲಾಗಿದೆ. ದಿನಾಂಕ: 02.11.2021ರ ಸುತ್ತೋಲೆ ಸಂಖ್ಯೆ: ಸಿಆಸುಇ

		65 ಸೇನಿಸಿ 2021ರಲ್ಲಿ ಸರ್ಕಾರಿ ನೌಕರರು ಸ್ಥಿರಾಸ್ತಿ/ಚರಾಸ್ತಿಯ ವ್ಯವಹರಣೆಗೆ ಸಂಬಂಧಿಸಿದಂತೆ ಅಗತ್ಯವಿರುವ ಪ್ರಕರಣಗಳಲ್ಲಿ ಮಾತ್ರ ಪೂರ್ವ ಮಂಜೂರಾತಿ ನೀಡಲು ನಿಯಮಿಸಿದ ಪ್ರಾಧಿಕಾರಗಳು ಕ್ರಮ ವಹಿಸಬೇಕೆಂದು ಸ್ಪಷ್ಟಪಡಿಸಲಾಗಿದೆ.
ಇ)	ರಾಜ್ಯ ಸರ್ಕಾರಿ ನೌಕರರ ಅಗತ್ಯ ಸೌಲಭ್ಯಗಳಾದ ರಜೆ, ವರ್ಗಾವಣೆ, ಅನುಮತಿ, ನಗದೀಕರಣ, ಉನ್ನತ ವ್ಯಾಸಂಗಕ್ಕೆ, ನಿವೃತ್ತಿ ಸೌಲಭ್ಯ ಸಂಬಳ ಮುಂತಾದವುಗಳನ್ನು ಆನ್‌ಲೈನ್ ಮೂಲಕ ಒದಗಿಸಲಾಗುವುದೇ; ಇವುಗಳನ್ನು ಸಕಾಲ ವ್ಯಾಪ್ತಿಗೆ ತರುವ ಬಗ್ಗೆ ಸರ್ಕಾರದ ಕ್ರಮವೇನು?	ಇ-ಆಡಳಿತ ವ್ಯವಸ್ಥೆಯ ಮೂಲಕ ರಾಜ್ಯ ಸರ್ಕಾರಿ ನೌಕರರ ಅಗತ್ಯ ಸೌಲಭ್ಯಗಳಾದ ರಜೆ, ವರ್ಗಾವಣೆ, ಅನುಮತಿ, ನಗದೀಕರಣ, ಉನ್ನತ ವ್ಯಾಸಂಗ, ನಿವೃತ್ತಿ ಸೌಲಭ್ಯ ಸಂಬಳ ಮುಂತಾದವುಗಳನ್ನು ಆನ್‌ಲೈನ್ ಮೂಲಕ ಒದಗಿಸಲು ಸರ್ಕಾರವು ಹಂತ ಹಂತವಾಗಿ ಕ್ರಮವಹಿಸುತ್ತಿದೆ. ಇಂತಹ ಸೇವೆಗಳನ್ನು ಈಗಾಗಲೇ ಸರ್ಕಾರದ ಹಲವು ಇಲಾಖೆಗಳಲ್ಲಿ ಸಕಾಲ ವ್ಯಾಪ್ತಿಗೆ ತರಲಾಗಿದೆ ಎಂದು ಸಿಆಸುಇ (ಇ-ಆಡಳಿತ) ಇಲಾಖೆಯು ತಿಳಿಸಿರುತ್ತದೆ.

e-ಕಡತ ಸಂಖ್ಯೆ: DPAR/162/SMR/2021

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ